**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.1282/2023**

ಪಿ.ಡಬ್ಲ್ಯೂಃ **4**

ಸಿ.ಡಬ್ಲ್ಯೂಃ 7

| | |
|---|---|
| ಹೆಸರು | ಃ ಟ ಆರ್ ರವಿ |
| ತಂದೆಯ ಹೆಸರು | ಃ ಲೇಟ್ ರಾಮಯ್ಯ |
| ವಯಸ್ಸು | ಃ 53 ವರ್ಷ |
| ಉದ್ಯೋಗ | ಃ ಎ ಎಸ್ ಐ |
| ವಾಸಸ್ಥಳ | ಃ ತರೀಕೆರೆ |

**ದಿನಾಂಕಃ 23-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

ಆರೋಪಿಯು ಈ ದಿನ ನ್ಯಾಯಾಲಯದಲ್ಲಿ ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಆರೋಪಿಯ ಗುರುತಿಸುವಿಕೆ ಬಗ್ಗೆ ತಕರಾರು ಇಲ್ಲ ಎಂದು ತಿಳಿಸಿರುತ್ತಾರೆ.

**ಮುಖ್ಯ ವಿಚಾರಣೆ ಃ ಸ.ಸ.ಅ. ರವರಿಂದ.**

ನಾನು **2018** ಜುಲೈ ತಿಂಗಳಿಂದ **2023** ಜುಲೈಯವರೆಗೆ ಲಕ್ಕವಳ್ಳಿ **ಪೋಲೀಸ್ ಠಾಣೆಯಲ್ಲಿ** ಮುಖ್ಯ ಪೇದೆಯಾಗಿ ಮತ್ತು ಎ ಎಸ್ ಐ **ಆಗಿ ಕರ್ತವ್ಯ** ನಿರ್ವಹಿಸಿರುತ್ತೇನೆ.

ದಿನಾಂಕಃ 03-04-2023 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಸಂಜೆ 5-00 ಗಂಟೆ ಸಮಯದಲ್ಲಿ ಚಾಸಾ-1 ರವರು ಚಾಸಾ-4 ರವರ ಹಸ್ತ ಕಳುಹಿಸಿಕೊಟ್ಟ ವರದಿಯನ್ನು ಸ್ವೀಕರಿಸಿ, ಠಾಣಾ ಮೊಕದ್ದಮೆ ಸಂಖ್ಯೆ 43/2023 ಕಲಂ 32, 34 ಕರ್ನಾಟಕ ಅಬಕಾರಿ ಕಾಯ್ದೆಯಡಿಯಲ್ಲಿ ಪ್ರಕರಣವನ್ನು ದಾಖಲಿಸಿ, ಪ್ರಥಮ ವರ್ತಮಾನ ವರದಿಯನ್ನು ತಯಾರು ಮಾಡಿ ಘನ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಂತರ ಚಾಸಾ-1 ರವರು ಮಾಲನ್ನು ಹಾಜರುಪಡಿಸಿದ್ದು, ಅದನ್ನು ಮಾಲುಪಟ್ಟಿ ಸಂಖ್ಯೆ 30/2023 ರಲ್ಲಿ ನಮೂದಿಸಿ, ಘನ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ವರದಿಯಾಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಪ್ರಥಮ ವರ್ತಮಾನ ವರದಿಯಾಗಿದ್ದು, ಸದರಿ ದಾಖಲೆಯನ್ನು ನಿಪಿ-4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಆರೋಪಿತರ ಪರ** ಶ್ರೀ ಎಲ್ ಪಿ ಎಸ್ **ವಕೀಲರಿಂದ.**

ಈ ಪ್ರಕರಣದಲ್ಲಿ ನಮ್ಮ ಮೇಲಾಧಿಕಾರಿಗಳೇ ಪಿರ್ಯಾದಿದಾರರು ಎಂದರೆ ಸರಿ. ಚಾಸಾ-1 ರವರು ನಿಮ್ಮ ಮೇಲಾಧಿಕಾರಿಗಳು ಆದ ಕಾರಣ ಯಾವುದೇ ತನಿಖೆ ಮಾಡದೇ ನೀವು ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ತಯಾರು ಮಾಡಿರುತ್ತೀರಾ ಎಂದರೆ ಸರಿಯಲ್ಲ. ನಿಮ್ಮ ಠಾಣಾ ಅಂಕಿ ಅಂಶಗಳಿಗೋಸ್ಕರ ಆರೋಪಿತರ ಮೇಲೆ ಸುಳ್ಳು ಪ್ರಥಮ ವರ್ತಮಾನ ವರದಿ ತಯರು ಮಾಡಿರುತ್ತೀರಾ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಅವರ ಮೇಲೆ ಸುಳ್ಳು ಪ್ರಕರಣದ ದಾಖಲು ಮಾಡಿರುತ್ತೀರಾ ಎಂದರೆ ಸರಿಯಲ್ಲ.

**ಮರುವಿಚಾರಣೆ:** ಇರುವುದಿಲ್ಲ.
**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

Sd/-
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**